151ನೇ ಪ್ರಶ್ನೆ=72 = (112)
4RK
3008

**ಕರ್ನಾಟಕ ವಿಧಾನ ಪರಿಷತ್ತು**

ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಇವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.

**ವಿಷಯ:** ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಗ್ರಾಮಗಳ ವ್ಯಾಪ್ತಿಯ ಸ್ವತ್ತುಗಳು ಈಗಾಗಲೇ ಪಂಚಾಯತಿಯಲ್ಲಿ ಖಾತೆಯಾಗಿದ್ದರೂ ಸಹ ಪಂಚಾಯತಿ ಅಧಿಕಾರಿಗಳು ಇ-ಸ್ವತ್ತು ಮಾಡಲು ನಿರಾಕರಿಸುತ್ತಿದ್ದು, ಇದರಿಂದಾಗಿ, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ.

=====

**ಉತ್ತರ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ-9 ಮತ್ತು 11ಎ ವಿತರಿಸುತ್ತಾರೆ.

ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ 11ಬಿ ವಿತರಿಸುತ್ತಾರೆ.

ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ.

ನಮೂನೆಗಳನ್ನು ವಿತರಿಸುವ ಸೇವೆಯು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ರ ವ್ಯಾಪ್ತಿಗೆ ಸೇರ್ಪಟ್ಟಿದ್ದು, 45 ದಿನಗಳೊಳಗೆ ಅರ್ಜಿದಾರರು ನಿಯಮಗಳ ಪ್ರಕಾರ ಎಲ್ಲಾ ದಾಖಲಾತಿಗಳನ್ನು ಅವರು ಒದಗಿಸಿದ್ದಲ್ಲಿ ನೀಡಬೇಕಾಗಿರುತ್ತದೆ.

ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು (ತೆರಿಗೆ ನಿರ್ಧಾರಣೆ ಪಟ್ಟಿ) ವಿತರಿಸಲು ಗ್ರಾಮ ಪಂಚಾಯತಿ ಸಭೆಯ ಅನುಮೋದನೆ ಅಗತ್ಯವಿದ್ದು, ಸದರಿ ಸಭೆಯನ್ನು ನಿಯಮಿತವಾಗಿ ಮತ್ತು ತ್ವರಿತವಾಗಿ ಮಾಡದ ಕಾರಣ ಮತ್ತು ಅರ್ಜಿಗಳನ್ನು ಜೇಷ್ಠತೆ ಆಧಾರದಲ್ಲಿ ವಿಲೇ ಮಾಡದಿರುವುದರಿಂದ ನಮೂನೆಗಳನ್ನು ವಿತರಿಸಲು ವಿಳಂಬವಾಗುತ್ತಿದ್ದು, ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು ಇತ್ಯರ್ಥಪಡಿಸಲು (First In First Out-FIFO) ಕ್ರಮ ವಹಿಸುವಂತೆ ಹಾಗೂ ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ವಿಲೇ ಇಡದಂತೆ ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ದಾಖಲೆಗಳ ಚೆಕ್‌ಲಿಸ್ಟ್‌ಗಳನ್ನು ಗ್ರಾಮ ಪಂಚಾಯತಿಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಅಳವಡಿಸುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ.

ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಬಿದರಕೋಟೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಗ್ರಾಮಗಳ ವ್ಯಾಪ್ತಿಯ ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು ನಮೂನೆ-11ಬಿ ಗಳನ್ನು ವಿತರಿಸಲು ಬಿದರಕೋಟೆ ಗ್ರಾಮ ಪಂಚಾಯತಿಗೆ ಸಲ್ಲಿಸಿರುವ ಯಾವುದೇ ಅರ್ಜಿಗಳನ್ನು ನಿರಾಕರಿಸಿರುವುದಿಲ್ಲ.

ದಿನಾಂಕ:15-06-2013 ರಿಂದ ಇ-ಸ್ವತ್ತು ತಂತ್ರಾಂಶ ಜಾರಿಗೆ ಬಂದಿದ್ದು, ಇದುವರೆವಿಗೂ 592 ನಮೂನೆ-9, 547 ನಮೂನೆ-11ಎ ಹಾಗೂ 305 ನಮೂನೆ-11ಬಿ ಗಳನ್ನು ಇ-ಸ್ವತ್ತು ತಂತ್ರಾಂಶಕ್ಕೆ ಅವಶ್ಯಕವಿರುವ ದಾಖಲೆಗಳನ್ನು ಪಡೆದುಕೊಂಡು ವಿತರಿಸಲಾಗಿದೆ.

ಸಂಖ್ಯೆ:RDPR 157 GPA 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.